## ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ , ಹಿರಿಯೂರು

ಸಿ ಸಿ ನಂ.1087/2021

| | | | |
|---|---|---|---|
| ಹೆಸರು | - | ಉಮೇಶ್ ಕುಮಾರ್ | CW-33<br>PW-3 |
| ತಂದೆ ಹೆಸರು | - | ಮಂಜಪ್ಪ | |
| ವಯಸ್ಸು | - | 39 ವರ್ಷ | |
| ಉದ್ಯೋಗ | - | ಪೊಲೀಸ್ ಇನ್ಸ್ ಪೆಕ್ಟರ್ ಸೈಬರ್ ಕ್ರೈಂ ಬೆಂಗಳೂರು | |
| ವಾಸಸ್ಥಳ | - | ಬೆಂಗಳೂರು | |

ದಿನಾಂಕಃ02.07.2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

**ಸಾಕ್ಷಿದಾರರ ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ**

ನಾನು ಜನವರಿ 2019 ರಿಂದ ಡಿಸೆಂಬರ್ 2019 ರವರೆಗೆ ಹಿರಿಯೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ01.05.2019 ರಲ್ಲಿ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಸ್ವೀಕರಿಸಿಕೊಂಡ ಠಾಣಾ ಗುನ್ನಾ ನಂ.159/2019 ರಂತೆ ಪ್ರಕರಣ ದಾಖಲಿಸಿಕೊಂಡು ಪ್ರ ವ ವರದಿ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಸಾಕ್ಷಿ ದೂರಿನಲ್ಲಿರುವ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಬಿ) ಎಂದು, ಪ್ರ ವ ವರದಿಯನ್ನು ನಿಪಿ-14 ಎಂದು, ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು. ನಂತರ ಚಾಸಾ.34 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತೇನೆ. ಅವರ ಸೂಚನೆಯಂತೆ ಮೃತ ಲಕ್ಷ್ಮಿ ಯಾನೆ ತಾಯಮ್ಮ ಇವರ ಶವ ಪಂಚನಾಮೆಯನ್ನು ಮಾಡಿ ವರದಿ ನೀಡಿರುತ್ತೇನೆ. ಶವ ತನಿಖೆ ವರದಿ ನೋಡಿ ಗುರುತಿಸಿದ್ದು ದಾಖಲೆಯನ್ನು ನಿಪಿ-15 ಎಂದು ಸಹಿಯನ್ನು ನಿಪಿ -15(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಆರೋಪಿ ಪರ ಶ್ರೀ ಸಿ ಕೆ ವಕೀಲರಿಂದಃ**

ದಿಃ01.05.2019 ರಲ್ಲಿ ಚಾಸಾ.1 ರವರು ಠಾಣೆಗೆ ಹಾಜರಾಗಿ ಯಾವುದೇ ದೂರ

ನೀಡಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಪ್ರಕರಣ ದಾಖಲಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ.34 ರವರಿಗೆ ಕಡತವನ್ನು ಹಸ್ತಾಂತರಿಸಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಶವ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಯಾವುದೇ ವರದಿಯನ್ನು ಚಾಸಾ.34 ರವರಿಗೆ ಹಸ್ತಾಂತರಿಸಿಲ್ಲ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು